# ಪೌಲನು ಥೆಸಲೋನಿಯರಿಗೆ ಬರೆದ ಎರಡನೆಯ ಪತ್ರ

## ಮುನ್ನುಡಿ

ಕ್ರಿಸ್ತಯೇಸುವಿನ ಪುನರಾಗಮನದ ಬಗ್ಗೆ ವಾದವಿವಾದಗಳು ಪ್ರಬಲವಾಗಿ ಥೆಸಲೋನಿಕದ ಸಭೆಯಲ್ಲಿ ಕಾಣಿಸಿಕೊಂಡಿದ್ದ ಗೊಂದಲ ಮುಂದುವರೆಯುತ್ತಿತ್ತು. ಪ್ರಭು ಯೇಸುವಿನ ಪುನರಾಗಮನದ ದಿನ ಈಗಾಗಲೇ ಬಂದಿದೆ ಎಂಬ ಅಭಿಪ್ರಾಯವನ್ನು ಕೆಲವರು ಪ್ರಚಾರ ಮಾಡುತ್ತಿದ್ದರು. ಇಂಥ ಅಭಿಪ್ರಾಯವನ್ನು ಅಲ್ಲಗಳೆಯುವ ಸಲುವಾಗಿ ಪೌಲನು ಈ ಪತ್ರವನ್ನು ಥೆಸಲೋನಿಕದ ಸಭೆಗೆ ಬರೆಯುತ್ತಾನೆ.

ಲೇಖಕನು ಥೆಸಲೋನಿಯರ ನಿಲುವನ್ನು ತಿದ್ದುತ್ತಾನೆ. ಕ್ರಿಸ್ತಯೇಸು ಪುನರಾಗಮಿಸುವುದಕ್ಕೆ ಮುಂಚೆ, ಕ್ರಿಸ್ತವಿರೋಧಿಯಾದ "ಪಾಪ ಪುರುಷ" ಎಂಬ ಗುಪ್ತಶಕ್ತಿಯ ಕೈವಾಡ ಹೆಚ್ಚಿ, ಕೆಡುಕು ಮತ್ತು ದುಷ್ಟತನ ಪರಮಾವಧಿಯನ್ನು ಮುಟ್ಟುತ್ತವೆ.

ಇಂತಿರಲು, ಕ್ರೈಸ್ತವಿಶ್ವಾಸಿಗಳು ತಮಗೆ ಬಂದೊದಗುವ ಕಷ್ಟಸಂಕಟಗಳಲ್ಲೂ ವಿಶ್ವಾಸದಲ್ಲಿ ಸ್ಥಿರವಾಗಿ ನಿಲ್ಲಬೇಕು; ಪ್ರೇಷಿತ ಪೌಲನ ಮತ್ತು ಅವನ ಸಂಗಡಿಗರ ಆದರ್ಶವನ್ನು ಅನುಸರಿಸಿ ದುಡಿಮೆಯಿಂದ ಜೀವನ ನಡೆಸಬೇಕು; ಒಳಿತನ್ನು ಮಾಡುವುದರಲ್ಲಿ ಇನಿತೂ ಹಿಂಜರಿಯದೆ ಮುನ್ನುಗ್ಗಲೇಬೇಕು ಎಂದು ಈ ಪತ್ರ ಓದುಗರನ್ನು ಹುರಿದುಂಬಿಸುತ್ತದೆ.

**ಪರಿವಿಡಿ**


| | | |
|---|---|---|
| ಪೀಠಿಕೆ | – | 1.1. – 1.2 |
| ಪ್ರೋತ್ಸಾಹ ಮತ್ತು ಪ್ರಶಂಸೆ | – | 1.3 – 1.12 |
| ಯೇಸುವಿನ ಪುನರಾಗಮನದ ಬಗ್ಗೆ ಉಪದೇಶ | – | 2.1 – 2.17 |
| ಕ್ರೈಸ್ತ ಸನ್ನಡತೆಗೆ ಸಲಹೆ | – | 3.1 – 3.16 |
| ಸಮಾಪ್ತಿ | – | 3.17 – 3.18 |


### ಪೀಠಿಕೆ

**1** ನಮ್ಮ ಪಿತನಾದ ದೇವರ ಹಾಗೂ ಪ್ರಭುವಾದ ಯೇಸುಕ್ರಿಸ್ತರ ಅನ್ಯೋನ್ಯತೆಯಲ್ಲಿರುವ ಥೆಸಲೋನಿಕದ
ಸಭೆಯವರಿಗೆ – ಪೌಲ, ಸಿಲ್ವಾನ ಹಾಗೂ ತಿಮೊಥೇಯರು ಬರೆಯುವ ಪತ್ರ.
2 ತಂದೆಯಾದ ದೇವರ ಮತ್ತು ಪ್ರಭುವಾದ ಯೇಸುಕ್ರಿಸ್ತರ ಅನುಗ್ರಹವೂ ಶಾಂತಿ ಸಮಾಧಾನವೂ
ನಿಮಗೆ ಲಭಿಸಲಿ !

### ಪ್ರಭುವಿನ ಪುನರಾಗಮನ

3 ಸಹೋದರರೇ, ನಿಮಗಾಗಿ ನಾವು ಯಾವಾಗಲೂ ದೇವರಿಗೆ ಕೃತಜ್ಞತೆಯನ್ನು ಸಲ್ಲಿಸಲು
ಬದ್ಧರಾಗಿದ್ದೇವೆ; ಹೀಗೆ ಸಲ್ಲಿಸುವುದು ಯುಕ್ತವೂ ಹೌದು. ಏಕೆಂದರೆ, ನಿಮ್ಮ ವಿಶ್ವಾಸವು ಪ್ರವರ್ಧಿಸುತ್ತಾ ಇದೆ.
ನಿಮ್ಮಲ್ಲಿರುವ ಪರಸ್ಪರ ಪ್ರೀತಿ ಹೆಚ್ಚುತ್ತಿದೆ. 4ಯಾವಾಗಲೂ ಸಹನೆಯಿಂದಲೂ ಸ್ಥಿರ ವಿಶ್ವಾಸದಿಂದಲೂ ನಿಮಗೆ
ಬಂದೊದಗಿರುವ ಕಷ್ಟಸಂಕಟಗಳನ್ನೂ ಚಿತ್ರಹಿಂಸೆಗಳನ್ನೂ ಅನುಭವಿಸುತ್ತಿದ್ದೀರಿ. ಅದಕ್ಕಾಗಿ ದೇವರ
ಸಭೆಗಳಲ್ಲಿ ನಿಮ್ಮನ್ನು ಕುರಿತು ನಾವು ಹೆಮ್ಮೆಯಿಂದ ಮಾತನಾಡುತ್ತೇವೆ. 5ನೀವು ಅನುಭವಿಸುತ್ತಿರುವುದೆಲ್ಲ

ದೇವರ ಸಾಮ್ರಾಜ್ಯಕ್ಕಾಗಿ. ಈ ಕಷ್ಟಾನುಭವಗಳ ಮೂಲಕ ದೇವರು ನಿಮ್ಮನ್ನು ತಮ್ಮ ಸಾಮ್ರಾಜ್ಯಕ್ಕೆ
ಅರ್ಹರನ್ನಾಗಿ ಮಾಡುತ್ತಾರೆ. ಇವುಗಳಲ್ಲಿ ನೀವು ತೋರಿಸುವ ಸಹನೆ ಹಾಗೂ ವಿಶ್ವಾಸ ಇವುಗಳೇ ದೇವರು
ನ್ಯಾಯವಾದ ತೀರ್ಪು ಮಾಡುತ್ತಾರೆಂಬುದಕ್ಕೆ ಸ್ಪಷ್ಟ ನಿದರ್ಶನಗಳು. 6ನ್ಯಾಯವಾದುದ್ದನ್ನೇ ಮಾಡುವ
ದೇವರು ನಿಮ್ಮನ್ನು ಹಿಂಸಿಸುವವರಿಗೆ ಪ್ರತಿಹಿಂಸೆಯನ್ನೂ ಮತ್ತು ಹಿಂಸೆಯನ್ನು ಸಹಿಸುತ್ತಿರುವ ನಿಮಗೆ,
ನಮ್ಮೊಡನೆ ಉಪಶಮನವನ್ನೂ ದಯಪಾಲಿಸುವರು. 7–8ಪ್ರಭುಯೇಸು ತಮ್ಮ ಪ್ರಭಾವಯುತ
ದೂತರೊಂದಿಗೆ ಸ್ವರ್ಗದಿಂದ ಪ್ರತ್ಯಕ್ಷರಾಗುವಾಗ, ಬೆಂಕಿಯ ಜ್ವಾಲೆಗಳು ಕಂಡುಬರುವುವು; ದೇವರನ್ನು
ಅರಿತು ಅಲ್ಲಗಳೆದವರಿಗೂ ನಮ್ಮ ಪ್ರಭು ಯೇಸುವಿನ ಶುಭಸಂದೇಶಕ್ಕೆ ಅವಿಧೇಯರಾಗಿ ವರ್ತಿಸಿದವರಿಗೂ
ತಕ್ಕ ಪ್ರತೀಕಾರವಾಗುವುದು. 9ಇವರು ಪ್ರಭುವಿನ ಸನ್ನಿಧಿಯಿಂದಲೂ ಅವರ ಪ್ರಭಾವದ ಮಹಿಮೆಯಿಂದಲೂ
ಬಹಿಷ್ಕೃತರಾಗಿ, ನಿತ್ಯದಂಡನೆಗೆ ಗುರಿಯಾಗುವರು. 10ಪ್ರಭು ತಮ್ಮ ಸದ್ಭಕ್ತರೆಲ್ಲರಿಂದ ಸನ್ಮಾನವನ್ನೂ
ವಿಶ್ವಾಸಿಗಳೆಲ್ಲರಿಂದ ಗೌರವವನ್ನೂ ಪಡೆಯುವ ಆ ದಿನದಲ್ಲಿ ಇದೆಲ್ಲಾ ಸಂಭವಿಸುವುದು. ನಾವು ನಿಮಗಿತ್ತ
ಸಾಕ್ಷಿಯನ್ನು ನಂಬಿದ ನೀವೆಲ್ಲರೂ ಅವರೊಂದಿಗಿರುವಿರಿ.

11 ಇದಕ್ಕಾಗಿ ನಿಮಗೋಸ್ಕರ ನಾವು ಸದಾ ಪ್ರಾರ್ಥಿಸುತ್ತೇವೆ. ದೇವರೇ ನೀಡಿರುವ ಕರೆಗೆ ನೀವು
ಯೋಗ್ಯರಾಗಿ ಬಾಳುವಂತಾಗಲಿ; ದೇವರ ಮಹಿಮಾಶಕ್ತಿಯಿಂದ ನಿಮ್ಮ ಶುಭಾಕಾಂಕ್ಷೆಗಳು ಮತ್ತು
ವಿಶ್ವಾಸಪ್ರೇರಿತ ಕಾರ್ಯಗಳು ಪೂರ್ಣವಾಗಲಿ. 12ಹೀಗೆ ನಿಮ್ಮ ಮುಖಾಂತರ ಪ್ರಭು ಯೇಸುವಿನ ನಾಮಕ್ಕೂ
ಮತ್ತು ಅವರಲ್ಲಿ ನಿಮಗೂ ಮಹಿಮೆಯುಂಟಾಗಲಿ. ನಮ್ಮ ದೇವರ ಹಾಗೂ ಪ್ರಭು ಯೇಸುಕ್ರಿಸ್ತರ
ಅನುಗ್ರಹದಿಂದ ಇದು ನೆರವೇರಲಿ.

## ಪಾಪಪುರುಷ

**2** ಸಹೋದರರೇ, ನಮ್ಮ ಪ್ರಭು ಯೇಸುಕ್ರಿಸ್ತರ ಪುನರಾಗಮನವನ್ನು ಮತ್ತು ನಾವು ಅವರ ಸನ್ನಿಧಿಯಲ್ಲಿ
ಒಂದಾಗಿ ಸೇರುವ ವಿಷಯವನ್ನು ಕುರಿತು ನಿಮ್ಮಲ್ಲಿ ನಾವು ವಿನಂತಿಸುವುದೇನೆಂದರೆ; 2ಪ್ರಭುವಿನ ದಿನವು
ಬಂದೇಬಿಟ್ಟಿತೆಂದು ಪ್ರವಾದನೆಯಿಂದಾಗಲಿ, ಪ್ರವಚನದಿಂದಾಗಲಿ ಅಥವಾ ನಮ್ಮ ಪತ್ರದಿಂದಾಗಲಿ ತಿಳಿದು
ಬಂದಿದೆಯೆಂದು ಯಾರಾದರೂ ಹೇಳಿದರೆ, ಒಮ್ಮೆಗೇ ನೀವು ತಬ್ಬಿಬ್ಬಾಗಿ, ತಳಮಳಗೊಳ್ಳದಿರಿ. 3ನಿಮ್ಮನ್ನು
ಯಾರೂ ಯಾವ ರೀತಿಯಲ್ಲೂ ವಂಚಿಸದಿರಲಿ. ಆ ದಿನವು ಬರುವುದಕ್ಕೆ ಮುಂಚೆ ದೇವರಿಗೆ ವಿರುದ್ಧವಾದ
'ಅಂತಿಮ ಪ್ರತಿಭಟನೆ' ಉಂಟಾಗುವುದು. 'ಪಾಪ ಪುರುಷನಾದ' ಅಧರ್ಮಿ ತಲೆ ಎತ್ತಿಕೊಳ್ಳುವನು.
4ದೇವರೆನಿಸಿಕೊಳ್ಳುವ ಎಲ್ಲವನ್ನೂ ಅಲ್ಲಗಳೆಯುವನು; ಆರಾಧನೆಗೈಯುವ ಎಲ್ಲವನ್ನೂ ಇಲ್ಲಗೊಳಿಸುವನು;
ಇವೆಲ್ಲಕ್ಕೂ ತಾವೇ ಮಿಗಿಲೆಂದು ಭಾವಿಸಿ ದೇವಮಂದಿರದಲ್ಲಿ ಕುಳಿತುಕೊಂಡು ತಾನೇ ದೇವರೆಂದು
ಘೋಷಿಸಿಕೊಳ್ಳುವನು.

5 ನಾನು ನಿಮ್ಮೊಡನೆ ಇದ್ದಾಗಲೇ ಇದೆಲ್ಲವನ್ನು ತಿಳಿಸಿದ ನೆನಪು ನಿಮಗಿಲ್ಲವೇ? 6ನಿಯಮಿತ ಕಾಲಕ್ಕೆ
ಮುಂಚೆ ಕಾಣಿಸಿಕೊಳ್ಳದಂತೆ ಅವನನ್ನು ತಡೆಹಿಡಿದಿರುವುದು ಯಾವುದೆಂದು ನೀವು ಬಲ್ಲಿರಿ. 7ಅಧರ್ಮವು
ಈಗಾಗಲೇ ಗುಪ್ತವಾಗಿ ತನ್ನ ಕೆಲಸವನ್ನು ಸಾಧಿಸುತ್ತಿದೆ; ತಡೆಗಟ್ಟಿರುವವನು ದಾರಿ ಬಿಡುವ ತನಕ ಅದು
ಗುಪ್ತವಾಗಿಯೇ ಇರುವುದು. 8ಆಮೇಲೆ ಆ ಅಧರ್ಮಿ ಕಾಣಿಸಿಕೊಳ್ಳುವನು. ಅವನನ್ನು ಪ್ರಭು ಯೇಸು ತಮ್ಮ
ಬಾಯುಸಿರಿನಿಂದಲೇ ಕೊಂದುಹಾಕುವರು; ತಮ್ಮ ಪ್ರತ್ಯಕ್ಷತೆಯ ತೇಜಸ್ಸಿನಿಂದಲೇ ತರಿದು ಬಿಡುವರು. 9ಆ
ಅಧರ್ಮಿ ಸೈತಾನನ ಶಕ್ತಿಯೊಂದಿಗೆ ಬರುವನು. ಮೋಸಗೊಳಿಸುವ ಎಲ್ಲಾ ಬಗೆಯ ಪವಾಡಗಳನ್ನು,
ಚಮತ್ಕಾರಗಳನ್ನು ಮತ್ತು ಶಕ್ತಿಯುತ ಕಾರ್ಯಗಳನ್ನು ಮಾಡಿತೋರಿಸುವನು. 10ಸತ್ಯವನ್ನು ಪ್ರೀತಿಸದೆ,
ಜೀವೋದ್ಧಾರವನ್ನು ನಿರಾಕರಿಸಿ, ವಿನಾಶದ ಮಾರ್ಗದಲ್ಲಿರುವವರನ್ನು ಎಲ್ಲಾ ತರಹದ ಕುಯುಕ್ತಿಯಿಂದ
ಅವನು ವಂಚಿಸುವನು. 11ಆದಕಾರಣ, ಅಸತ್ಯವನ್ನು ನಂಬುವಂಥ ಗಾಢಭ್ರಮೆಗೆ ದೇವರು ಅವರನ್ನು
ಒಳಪಡಿಸುವರು. 12ಹೀಗೆ ಸತ್ಯವನ್ನು ವಿಶ್ವಾಸಿಸದೆ, ಅಧರ್ಮದಲ್ಲಿ ಆನಂದಿಸುವವರೆಲ್ಲರೂ ಖಂಡನೆಗೆ
ಗುರಿಯಾಗುವರು.

### ಪ್ರಥಮ ಫಲ

13 ಸಹೋದರರೇ, ಪ್ರಭುವಿಗೆ ಪ್ರಿಯರಾದವರೇ, ನಿಮಗಾಗಿ ನಿರಂತರವೂ ದೇವರಿಗೆ ಕೃತಜ್ಞತೆಯನ್ನು ಸಲ್ಲಿಸಲು ನಾವು ಬದ್ಧರು. ಏಕೆಂದರೆ, ದೇವರು ನಿಮ್ಮನ್ನು ಪವಿತ್ರಾತ್ಮರ ಮುಖಾಂತರ ಪಾವನಗೊಳಿಸಿ, ನೀವು ಸತ್ಯದಲ್ಲಿ ವಿಶ್ವಾಸವಿಡುವಂತೆ ಮಾಡಿ, ಜೀವೋದ್ಧಾರವನ್ನು ಪಡೆಯುವಂತೆ ನಿಮ್ಮನ್ನು ಪ್ರಥಮ ಫಲವನ್ನಾಗಿ ಆರಿಸಿಕೊಂಡಿದ್ದಾರೆ. [14]ಹೀಗೆ ಉದ್ಧಾರಹೊಂದಿ ನಮ್ಮ ಪ್ರಭು ಯೇಸುಕ್ರಿಸ್ತರ ಮಹಿಮೆಯಲ್ಲಿ ನೀವು ಸಹ ಪಾಲುಗೊಳ್ಳುವಂತೆ, ನಾವು ಸಾರಿದ ಶುಭಸಂದೇಶದ ಮೂಲಕ ದೇವರು ನಿಮ್ಮನ್ನು ಕರೆದಿದ್ದಾರೆ. [15]ಆದ್ದರಿಂದ ಸಹೋದರರೇ, ನಾವು ನಿಮಗೆ ಬಾಯಿ ಮಾತಿನಿಂದಾಗಲಿ, ಪತ್ರದ ಮೂಲಕವಾಗಲಿ ಬೋಧಿಸಿರುವ ಸತ್‌ಸಂಪ್ರದಾಯಗಳನ್ನು ಪ್ರಾಮಾಣಿಕವಾಗಿ ಪಾಲಿಸುತ್ತಾ ಸ್ಥಿರವಾಗಿ ನಿಲ್ಲಿರಿ.

16 ನಮ್ಮನ್ನು ಪ್ರೀತಿಸಿ ನಿತ್ಯಾದರಣೆಯನ್ನೂ ಉತ್ತಮ ನಿರೀಕ್ಷೆಯನ್ನೂ ಅನುಗ್ರಹವಾಗಿ ಕೊಟ್ಟಿರುವ ನಮ್ಮ ಪ್ರಭುವಾದ ಯೇಸುಕ್ರಿಸ್ತರು ಹಾಗೂ ಪಿತನಾದ ದೇವರು ನಿಮ್ಮ ಹೃನ್ಮನಗಳನ್ನು ಉತ್ತೇಜನಗೊಳಿಸಲಿ. ಸಕಲ ಸತ್ಕಾರ್ಯಗಳಲ್ಲೂ ಸನ್ನುಡಿಯಲ್ಲೂ ನಿಮ್ಮನ್ನು ದೃಢಪಡಿಸಲಿ.

### ಪ್ರೇಷಿತರಿಗಾಗಿ ಪ್ರಾರ್ಥನೆ

**3** ಕೊನೆಯದಾಗಿ ಸಹೋದರರೇ, ನಮಗಾಗಿಯೂ ಪ್ರಾರ್ಥನೆಮಾಡಿ; ಪ್ರಭುವಿನ ಸಂದೇಶ ನಿಮ್ಮಲ್ಲಿ ಹಬ್ಬಿಹರಡಿದಂತೆ ಎಲ್ಲೆಲ್ಲಿಯೂ ಪಸರಿಸಿ ಪ್ರಖ್ಯಾತವಾಗಲಿ. [2]ದುಷ್ಟರ ಹಾಗೂ ಕೆಡುಕರ ಬಲೆಗೆ ನಾವು ಬೀಳದಂತೆ ಪ್ರಾರ್ಥಿಸಿರಿ. ಏಕೆಂದರೆ, ವಿಶ್ವಾಸವೆಂಬುದು ಎಲ್ಲರಲ್ಲಿಯೂ ಇರುವುದಿಲ್ಲ.

3 ಪ್ರಭು ವಿಶ್ವಾಸಕ್ಕೆ ಪಾತ್ರರು. ಅವರು ನಿಮ್ಮನ್ನು ಸದೃಢರನ್ನಾಗಿ ಮಾಡಿ ಕೇಡಿನಿಂದ ನಿಮ್ಮನ್ನು ಕಾಪಾಡುವರು. [4]ನಾವು ನಿಮಗಿತ್ತ ಆಜ್ಞೆಗಳನ್ನು ಪಾಲಿಸಿಕೊಂಡು ಬರುತ್ತಿದ್ದೀರಿ; ಇನ್ನು ಮುಂದೆಯೂ ಪಾಲಿಸುತ್ತೀರಿ ಎಂದು ನಿಮ್ಮ ವಿಷಯವಾಗಿ ಪ್ರಭುವಿನಲ್ಲಿ ನಮಗೆ ಭರವಸೆಯಿದೆ.

5 ದೇವರ ಪ್ರೀತಿಯನ್ನೂ ಕ್ರಿಸ್ತಯೇಸುವಿನ ಸಹನೆಯನ್ನೂ ನೀವು ಕಲಿತುಕೊಳ್ಳುವಂತೆ, ಪ್ರಭುವೇ ನಿಮ್ಮ ಅಂತರಂಗವನ್ನು ಬೆಳಗಿಸಲಿ.

### ದುಡಿಯಲೊಲ್ಲದವನು ಉಣಲೂ ಬಾರದು

6 ಪ್ರಿಯ ಸಹೋದರರೇ, ಪ್ರಭು ಯೇಸುಕ್ರಿಸ್ತರ ಹೆಸರಿನಲ್ಲಿ ನಾವು ನಿಮಗೆ ಆಜ್ಞಾಪಿಸುವುದೇನೆಂದರೆ; ನಾವು ನಿಮಗೆ ಬೋಧಿಸಿದ ಸದಾಚಾರವನ್ನು ಪಾಲಿಸದೆ, ಮೈಗಳ್ಳತನದಿಂದ ದಿನಗಳೆಯುವ ಯಾವ ಸೋದರನೊಂದಿಗೂ ಸಂಪರ್ಕವಿಟ್ಟುಕೊಳ್ಳಬೇಡಿ. [7]ನಾವು ಹೇಗೆ ನಡೆದುಕೊಂಡೆವೋ ಹಾಗೆಯೇ, ನೀವು ಸಹ ನಡೆದುಕೊಳ್ಳಬೇಕೆಂಬುದು ನಿಮಗೆ ತಿಳಿದ ವಿಷಯ. ನಾವು ನಿಮ್ಮ ಬಳಿಯಿದ್ದಾಗ ಸೋಮಾರಿಗಳಾಗಿರಲಿಲ್ಲ. [8]ಪುಕ್ಕಟೆಯಾಗಿ ನಾವು ಯಾರ ಅನ್ನವನ್ನೂ ಉಣ್ಣಲಿಲ್ಲ. ನಿಮ್ಮಲ್ಲಿ ಯಾರಿಗೂ ಹೊರೆಯಾಗಬಾರದೆಂದು ಹಗಲಿರುಳೂ ನಾವೇ ಕಷ್ಟಪಟ್ಟು ದುಡಿದಿದ್ದೇವೆ. [9]ನಿಮ್ಮಿಂದ ಪೋಷಣೆ ಪಡೆಯಲು ನಮಗೆ ಹಕ್ಕಿಲ್ಲವೆಂದಲ್ಲ; ನೀವು ನಮ್ಮನ್ನು ಅನುಸರಿಸಿ ನಡೆಯುವಂತೆ, ನಿಮಗೆ ಆದರ್ಶವಾಗಿ ಇರಬೇಕೆಂದೇ ನಾವು ಹೀಗೆ ಮಾಡಿದೆವು. [10]ನಾವು ನಿಮ್ಮೊಡನಿದ್ದಾಗ, "ದುಡಿಯಲೊಲ್ಲದವನು ಉಣಲೂಬಾರದು," ಎಂದು ನಿಮಗೆ ಆಜ್ಞಾಪಿಸಿದ್ದೆವು.

11 ಈಗಲಾದರೋ ನಿಮ್ಮಲ್ಲಿ ಕೆಲವರು ದುಡಿಯದೆ ಮೈಗಳ್ಳರಾಗಿ ಅಲ್ಲಲ್ಲಿ ಅಲೆದಾಡುತ್ತಾ ಹರಟೆಮಲ್ಲರಾಗಿದ್ದಾರೆಂದು ನಮಗೆ ತಿಳಿದು ಬಂದಿದೆ. [12]ಇಂಥವರು ತಮ್ಮ ಜೀವನೋಪಾಯಕ್ಕಾಗಿ ತಾವೇ ದುಡಿದು ಸಂಪಾದಿಸಬೇಕೆಂದು ಪ್ರಭು ಯೇಸುವಿನ ಹೆಸರಿನಲ್ಲಿ ಎಚ್ಚರಿಸಿ ಆಜ್ಞಾಪಿಸುತ್ತೇವೆ.

13ನೀವಾದರೋ ಸಹೋದರರೇ, ಸತ್ಕಾರ್ಯದ ಸಾಧನೆ ಸಾಕಾಯಿತೆಂದು ಹೇಳದಿರಿ. [14]ಈ ಪತ್ರದ ಮೂಲಕ ನಾವು ಹೇಳಿರುವ ಮಾತನ್ನು ಯಾರಾದರೂ ಕೇಳದಿದ್ದರೆ, ಅಂಥವನನ್ನು ಗುರುತಿಸಿ ಅವನ ಸಹವಾಸವನ್ನೇ ತೊರೆದುಬಿಡಿ. ಹೀಗೆ ಮಾಡಿದರೆ, ಅವನಿಗೆ ನಾಚಿಕೆಯಾಗುವುದು. [15]ಆದರೂ ಅವನನ್ನು ಶತ್ರುವೆಂದು ಭಾವಿಸದೆ, ಸಹೋದರನಂತೆ ಕಂಡು, ಬುದ್ಧಿಹೇಳಿರಿ.

**ಶುಭಾಶಯಗಳು**

16 ಶಾಂತಿದಾತರಾದ ಪ್ರಭು ಎಲ್ಲ ಕಾಲಕ್ಕೂ ಎಲ್ಲ ವಿಧದಲ್ಲಿಯೂ ನಿಮಗೆ ಶಾಂತಿಯನ್ನು ದಯಪಾಲಿಸಲಿ. ಪ್ರಭು ನಿಮ್ಮೆಲ್ಲರೊಡನೆ ಇರಲಿ !

17 ಪೌಲನೆಂಬ ನಾನು ಸ್ವತಃ ನನ್ನ ಕೈಯಿಂದಲೇ ಇದನ್ನು ಬರೆಯುತ್ತಿದ್ದೇನೆ. ನನ್ನ ಪ್ರತಿ ಪತ್ರಕ್ಕೂ, ನಾನು ಹಾಕುವ ಸಹಿ ಹಾಗೂ ನಾನು ಬರೆಯುವ ಧಾಟಿ ಇದೇ.
ನಿಮಗೆ ನನ್ನ ಶುಭಾಶಯಗಳು !

18 ನಮ್ಮ ಪ್ರಭು ಯೇಸುಕ್ರಿಸ್ತರ ಅನುಗ್ರಹ ನಿಮ್ಮೆಲ್ಲರೊಡನೆ ಇರಲಿ !